# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 546

ಸದಸ್ಯರ ಹೆಸರು : ಶ್ರೀ ಎನ್. ಅಪ್ಪಾಜಿಗೌಡ

ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 11-12-2020

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಅ | ಕೋವಿಡ್-19 ರಿಂದ ಸಾರಿಗೆ ಇಲಾಖೆಯಲ್ಲಿ ಉದ್ಭವಿಸಿರುವ ಸಮಸ್ಯೆಗಳಾವುವು; ಸಮಸ್ಯೆಗಳನ್ನು ಬಗೆಹರಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳಾವುವು; (ಮಾಹಿತಿ ನೀಡುವುದು) | ಸಾರಿಗೆ ಇಲಾಖೆಯ ಕಛೇರಿಗಳಿಗೆ ಪ್ರತಿದಿನ ನೂರಾರು ಸಂಖ್ಯೆಯಲ್ಲಿ ಸಾರ್ವಜನಿಕರು ಬೇರೆ ಬೇರೆ ಕೆಲಸಗಳಿಗಾಗಿ ಬರುತ್ತಿದ್ದು, ಅವರುಗಳಿಂದ ಕೊರೋನಾ ವೈರಸ್ ಹರಡದಂತೆ ಮುನ್ನೆಚ್ಚರಿಕೆ ಕ್ರಮ ತೆಗೆದುಕೊಳ್ಳಲು ಇಲಾಖೆಯು ಕೈಗೊಂಡಿರುವ ಕ್ರಮದ ಮಾಹಿತಿಯನ್ನು ಹಾಗೂ ಕೋವಿಡ್-19 (ಕರೋನಾ) ರಿಂದ ನಾಲ್ಕೂ ಸಾರಿಗೆ ಸಂಸ್ಥೆಗಳಲ್ಲಿ ಉದ್ಭವಿಸಿರುವ ಸಮಸ್ಯೆಗಳು ಹಾಗೂ ಈ ಸಮಸ್ಯೆಗಳನ್ನು ಬಗೆಹರಿಸಲು ಮತ್ತು ಸಾರಿಗೆ ಸಿಬ್ಬಂದಿಗಳಿಗೆ ಕೋವಿಡ್-19ರಿಂದ ಸುರಕ್ಷಿತವಾಗಿರಲು ಕೈಗೊಂಡಿರುವ ಕ್ರಮಗಳ ವಿವರಗಳನ್ನು <u>ಅನುಬಂಧ-1</u> ರಲ್ಲಿ ನೀಡಲಾಗಿದೆ. |
| ಆ | ಸಾರಿಗೆ ಇಲಾಖೆ ಸಿಬ್ಬಂದಿಗಳಿಗೆ ಕೋವಿಡ್-19ರಿಂದ ಸುರಕ್ಷಿತವಾಗಿರಲು ಯಾವ ಯಾವ ಕ್ರಮ ಕೈಗೊಳ್ಳಲಾಗಿದೆ; ಈ ಸಂಬಂಧ ತಮ್ಮ ಇಲಾಖೆಯಿಂದ ಕೋವಿಡ್-19ರ ಸಂಬಂಧ ಎಷ್ಟು ಮೊತ್ತವನ್ನು ಖರ್ಚು ಮಾಡಲಾಗಿದೆ; (ವಿವರ ನೀಡುವುದು) | ಸಾರಿಗೆ ಆಯುಕ್ತರ ಕಛೇರಿ ಮತ್ತು ಅಧೀನ ಕಛೇರಿಗಳಲ್ಲಿ ಕೋವಿಡ್-19 ಸಂಬಂಧಿಸಿದಂತೆ, Sanitiser, MASK, Disinfection Activities ಮತ್ತು ಇತರೆ ಉದ್ದೇಶಗಳಿಗಾಗಿ ರೂ.21,62,988/- ಗಳ ಮೊತ್ತವನ್ನು ಖರ್ಚು ಮಾಡಲಾಗಿದೆ.<br>ಕೋವಿಡ್-19ರಿಂದ ಸಾರಿಗೆ ಸಂಸ್ಥೆಗಳ ಸಿಬ್ಬಂದಿಗಳನ್ನು ಸುರಕ್ಷಿತವಾಗಿರಲು ಸ್ಯಾನಿಟೈಸರ್, ಮುಖಗವಚ, ಫೇಸ್ ಶೀಲ್ಡ್, ಆಕ್ಸಿಮೀಟರ್, ಡೆಟಾಲ್, ಸೋಡಿಯಂ ಹೈಪೋಕ್ಲೋರೈಟ್, ಕೈಗವಚ, ಥರ್ಮಾಮೀಟರ್ ಸೆನ್ಸಾರ್, ಆಕ್ಸೀಮೀಟರ್, ಇತ್ಯಾದಿಗಳ ಖರೀದಿಗೆ, ಕೋವಿಡ್ ಪೀಡಿತ ಸಿಬ್ಬಂದಿಗಳಿಗೆ ನೀಡಲಾದ ವೈದ್ಯಕೀಯ ಮುಂಗಡ, ಅರಿವು ಮತ್ತು ಜಾಗೃತಿಗಾಗಿ (ಜಾಹೀರಾತು, ಸ್ಟಿಕ್ಕರ್, ಬ್ಯಾನರ್ ಇತ್ಯಾದಿ) ಖರ್ಚು ಮಾಡಲಾದ ವಿವರಗಳನ್ನು ಈ ಕೆಳಕಂಡಂತೆ ನೀಡಲಾಗಿದೆ.<br><u>ಕ.ರಾ.ರ.ಸಾ.ನಿಗಮ</u> - ರೂ.96,06,914/-<br><u>ಬೆಂ.ಮ.ಸಾ.ಸಂಸ್ಥೆ</u> - ರೂ.1,37,68,335/-<br><u>ವಾ.ಕ.ರ.ಸಾ.ಸಂಸ್ಥೆ</u> - ರೂ.34,21,000/-<br><u>ಈ.ಕ.ರ.ಸಾ.ಸಂಸ್ಥೆ</u> - ರೂ.35,32,000/- |
| ಇ | ಸಾರ್ವಜನಿಕ ಬಸ್ಸುಗಳಲ್ಲಿ ಸಾಮಾಜಿಕ ಅಂತರ ಕಾಪಾಡುವ ಸಂಬಂಧ ಯಾವ ಕ್ರಮ ಕೈಗೊಳ್ಳಲಾಗಿದೆ; ಬಸ್‌ನಲ್ಲಿ ಪ್ರಯಾಣಿಸುವ ಪ್ರಯಾಣಿಕರ ಸಂಖ್ಯೆಯನ್ನು ಕಡಿತಗೊಳಿಸಲಾಗಿದೆಯೇ; ಇದರಿಂದ ಸರ್ಕಾರಕ್ಕೆ ಆಗಿರುವ ಲಾಭ ಮತ್ತು ನಷ್ಟವೇನು; ಇದನ್ನು ಸರಿದೂಗಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳಾವುವು; | ಖಾಸಗಿ ಮಜಲು ವಾಹನಗಳಲ್ಲಿ ಪ್ರಯಾಣಿಕರಿಗೆ ಕೋವಿಡ್-19 ರೋಗ ಹರಡದಂತೆ ತೆಗೆದುಕೊಳ್ಳಬೇಕಾದ ಮುನ್ನೆಚ್ಚರಿಕೆ ಕಾರ್ಯಾಚರಣೆ ವಿಧಾನಗಳ ಬಗ್ಗೆ ಎಲ್ಲಾ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ಸುತ್ತೋಲೆ ಮೂಲಕ ಆದೇಶ ನೀಡಿ ಖಾಸಗಿ ಮಜಲು ವಾಹನಗಳ ಕಾರ್ಯಾಚರಣೆ ಮಾಡುವಾಗ ಖಾಸಗಿ ವಾಹನ ಮಾಲೀಕರು ಪಾಲಿಸಬೇಕಾದ ಮಾರ್ಗಸೂಚಿಗಳನ್ನು, ಬಸ್ ನಿಲ್ದಾಣಗಳ / ಬಸ್ ನಿಲುಗಡೆಗಳಲ್ಲಿ ತೆಗೆದುಕೊಳ್ಳಬೇಕಾದ ಕ್ರಮಗಳ ಕುರಿತು ಸೂಚನೆಗಳನ್ನು ನೀಡಲಾಗಿರುತ್ತದೆ.<br>ಕೋವಿಡ್-19 ಲಾಕ್‌ಡೌನ್ ಅವಧಿಯಲ್ಲಿ ಖಾಸಗಿ ಬಸ್‌ಗಳ ಕಾರ್ಯಾಚರಣೆ ನಡೆಸದೆ ಅಧ್ಯರ್ಪಣೆಯಲ್ಲಿರಿಸಿರುವುದರಿಂದ ಸರ್ಕಾರಕ್ಕೆ ಬರಬೇಕಾದ ತೆರಿಗೆ ರಾಜಸ್ವ ಸಂಗ್ರಹದಲ್ಲಿ ಕಡಿಮೆಯಾಗಿರುತ್ತದೆ.<br>ಲಾಕ್‌ಡೌನ್ ಸಡಿಲಿಕೆಯ ನಂತರ, ಎಲ್ಲಾ ರೀತಿಯ ಬಸ್ಸುಗಳಲ್ಲಿ ಸಾಮಾಜಿಕ ಅಂತರವನ್ನು ಕಾಪಾಡಿಕೊಳ್ಳಲು ಮೊದಲಿಗೆ ವಾಹನದ ಆಸನ ಸಂಖ್ಯೆಯ ಶೇ.50 ರಷ್ಟು ಮಾತ್ರ ಪ್ರಯಾಣಿಕರನ್ನು ಅನುಮತಿಸಲಾಗಿದ್ದು, ನಂತರದಲ್ಲಿ, ಬಸ್ಸುಗಳಲ್ಲಿ ಲಭ್ಯವಿರುವ ಆಸನಗಳ ಸಂಖ್ಯೆಯಷ್ಟು ಪ್ರಯಾಣಿಕರನ್ನು ಮಾತ್ರ ಅನುಮತಿಸಲಾಗಿರುತ್ತದೆ. ಇದರಿಂದ ಬಸ್‌ನಲ್ಲಿ ಪ್ರಯಾಣಿಸುವ ಪ್ರಯಾಣಿಕರ ಸಂಖ್ಯೆಯನ್ನು ಕಡಿತಗೊಳಿಸಲಾಗಿದೆ. |

--2

ಇದರಿಂದ ಸಾರಿಗೆ ಸಂಸ್ಥೆಗಳಿಗೆ ಏಪ್ರಿಲ್-2020 ರಿಂದ ಡಿಸೆಂಬರ್-2020ರ ಅವಧಿಯಲ್ಲಿ ಆಗಿರುವ ನಷ್ಟದ ಮಾಹಿತಿ ಈ ಕೆಳಕಂಡಂತಿದೆ:

| ನಿಗಮದ ಹೆಸರು | ಆದಾಯದಲ್ಲಿನ ನಷ್ಟ |
|---|---|
| ಕ.ರಾ.ರ.ಸಾ.ನಿಗಮ | 829.74 |
| ಬೆಂ.ಮ.ಸಾ.ಸಂಸ್ಥೆ | 696.67 |
| ವಾ.ಕ.ರ.ಸಾ.ಸಂಸ್ಥೆ | 587.77 |
| ಈ.ಕ.ರ.ಸಾ.ಸಂಸ್ಥೆ | 452.53 |
| **ಒಟ್ಟು** | **2566.71** |

ಇದನ್ನು ಸರಿದೂಗಿಸಲು ತೆಗೆದು ಕೊಂಡಿರುವ ಕ್ರಮದ ವಿವರಗಳನ್ನು ಅನುಬಂಧ-2ರಲ್ಲಿ ನೀಡಲಾಗಿದೆ.

ಸಂಖ್ಯೆ: ಟಿಡಿ 122 ಟಿಡಿಕ್ಯೂ 2020

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಸಾರಿಗೆ ಇಲಾಖೆಯ ಕಛೇರಿಗಳಿಗೆ ಪ್ರತಿ ದಿನ ನೂರಾರು ಸಂಖ್ಯೆಯಲ್ಲಿ ಸಾರ್ವಜನಿಕರು ಬೇರೆ ಬೇರೆ ಕೆಲಸಗಳಿಗಾಗಿ ಬರುತ್ತಿದ್ದು, ಅವರುಗಳಿಂದ ಕರೋನಾ ವೈರಸ್ ಹರಡದಂತೆ ಮುನ್ನೆಚ್ಚರಿಕೆ ಕ್ರಮ ತೆಗೆದುಕೊಳ್ಳುವುದು ಅವಶ್ಯಕವಾಗಿರುತ್ತದೆ. ಆದುದರಿಂದ ಇಲಾಖೆಯ ಎಲ್ಲಾ ಅಧೀನ ಕಛೇರಿಗಳಿಗೆ ಈ ಕೆಳಗಿನ ಕ್ರಮಗಳನ್ನು ಕಟ್ಟುನಿಟ್ಟಾಗಿ ತೆಗೆದುಕೊಳ್ಳುವಂತೆ ಸೂಚಿಸಿ ದಿನಾಂಕ:18-03-2020 ರಂದು ಸುತ್ತೋಲೆಯನ್ನು ಹೊರಡಿಸಲಾಗಿದೆ.

1. ಕಛೇರಿಗಳಿಗೆ ಬರುವ ಸಾರ್ವಜನಿಕರು ಗುಂಪು ಕಟ್ಟಿ ನಿಲ್ಲುವುದನ್ನು ಪ್ರತಿಬಂಧಿಸುವುದು
2. ಕಲಿಕಾ ಮತ್ತು ಚಾಲನಾ ಲೈಸೆನ್ಸ್ ಪಡೆಯಲು ಬರುವ ಅಭ್ಯರ್ಥಿಗಳು ಅವರಿಗೆ ನೀಡಲಾದ ಸಮಯದಲ್ಲಿಯೇ (Slot) ಬರುವಂತೆ ಸೂಚಿಸುವುದು. ಕೋವಿಡ್ ಇರುವುದರಿಂದ ಶೇ.50 ಅಭ್ಯರ್ಥಿಗಳು ಮಾತ್ರ ಪರೀಕ್ಷೆಗೆ ಹಾಜರಾಗಲು ಅವಕಾಶ ಕಲ್ಪಿಸಲಾಗಿದೆ.
3. ಕಲಿಕಾ ಮತ್ತು ಚಾಲನಾ ಪರವಾನಗಿ ಪಡೆಯಲು ಬರುವ ಅಭ್ಯರ್ಥಿಗಳು ಪರೀಕ್ಷೆ ನೀಡುವ ಮುನ್ನ ಮತ್ತು ನಂತರ ಅವರ ಕೈಗಳನ್ನು ಸ್ಯಾನಿಟೈಸರ್‌ನಿಂದ ಸ್ವಚ್ಛಪಡಿಸಿಕೊಳುವುದನ್ನು ಖಾತರಿಪಡಿಸಿಕೊಳ್ಳುವುದು.
4. ಕಲಿಕಾ ತರಬೇತಿಗೆ ಬಳಸುವ ಕೊಠಡಿಯನ್ನು ಪರೀಕ್ಷೆ ಆರಂಭಿಸುವ ಮುನ್ನ ಸ್ವಚ್ಛಗೊಳಿಸುವುದು ಹಾಗೂ ಚಾಲನಾ ಪರೀಕ್ಷೆ ನೀಡಲು ಒಂದೇ ವಾಹನವನ್ನು ಹಲವು ಮಂದಿ ಬಳಸುವುದಾದರೆ ವಾಹನವನ್ನು ಸೂಕ್ತ ರೀತಿಯಲ್ಲಿ ಸ್ವಚ್ಛಗೊಳಿಸುವುದನ್ನು ಖಾತರಿ ಪಡಿಸಿಕೊಳ್ಳುವುದು. ಹಾಗೆಯೇ ಅಭ್ಯರ್ಥಿಗಳು ತಮ್ಮ ಕೈಗಳನ್ನು ಪರೀಕ್ಷೆಗೆ ಮುನ್ನ ಹಾಗೂ ನಂತರ ಸ್ಯಾನಿಟೈಸರ್‌ನಿಂದ ಸ್ವಚ್ಛಗೊಳಿಸಿಕೊಳ್ಳಲು ಸೂಚಿಸುವುದು.
5. ಎಲ್ಲಾ ಕಛೇರಿಗಳ ಮುಂದೆ ಕರೋನಾ ವೈರಸ್ ಬಗ್ಗೆ ಎಚ್ಚರಿಕೆ ನೀಡುವ ಫಲಕಗಳನ್ನು ಪ್ರದರ್ಶಿಸುವುದು.
6. ಸ್ಥಳೀಯ ಆರೋಗ್ಯಾಧಿಕಾರಿಗಳೊಂದಿಗೆ ಚರ್ಚಿಸಿ ಅವಶ್ಯವಿದ್ದಲ್ಲಿ ಹೆಚ್ಚಿನ ಪ್ರತಿಬಂಧಕ ಕ್ರಮಗಳನ್ನು ತೆಗೆದುಕೊಳ್ಳುವುದು.

ಸಾರಿಗೆ ಆಯುಕ್ತರ ಕಛೇರಿ ಮತ್ತು ಅಧೀನ ಕಛೇರಿಗಳಲ್ಲಿ ಕೋವಿಡ್-19 ಸಂಬಂಧಿಸಿದಂತೆ Sanitiser, Mask, Disinfection Activities ಮತ್ತು ಇತರೆ ಉದ್ದೇಶಗಳಿಗಾಗಿ ರೂ.21,62,988/-ಗಳ ಮೊತ್ತವನ್ನು ಖರ್ಚು ಮಾಡಲಾಗಿದೆ.

<u>**ಕೋವಿಡ್-19 ರಿಂದ ಸಾರಿಗೆ ಸಂಸ್ಥೆಗಳಲ್ಲಿ ಉದ್ಭವಿಸಿರುವ ಸಮಸ್ಯೆಗಳು ಈ ಕೆಳಕಂಡಂತಿವೆ:**</u>

- ➢ ಕೋವಿಡ್-19ರ ಹಿನ್ನೆಲೆಯಲ್ಲಿ ಸಂಪೂರ್ಣ ಲಾಕ್‌ಡೌನ್ ಘೋಷಿಸಿದ್ದರಿಂದ, ದಿನಾಂಕ 23.03.2020 ರಿಂದ 03.05.2020 ರವರೆಗೆ ಸಾರಿಗೆಗಳ ಕಾರ್ಯಾಚರಣೆಯನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸಿದ್ದರ ಪರಿಣಾಮವಾಗಿ ಸಾರಿಗೆ ಆದಾಯ ನಷ್ಟವಾಗಿರುತ್ತದೆ. ಸಾರಿಗೆ ಆದಾಯ ಹಾಗೂ ಇತರೇ ಆದಾಯವು ನಿರೀಕ್ಷಿತ ಮಟ್ಟದಲ್ಲಿ ಸಂಗ್ರಹವಾಗುತ್ತಿರುವುದಿಲ್ಲ. ಇದರಿಂದಾಗಿ ಸಿಬ್ಬಂದಿಗಳ ವೇತನ ಹಾಗೂ ಇತರೆ ಖರ್ಚುಗಳನ್ನು ಭರಿಸುವಲ್ಲಿ ಆರ್ಥಿಕ ಸಂಕಷ್ಟವನ್ನು ಎದುರಿಸುತ್ತಿವೆ.
- ➢ ವಾಹನಗಳ ಕಾರ್ಯಾಚರಣೆ ಸ್ಥಗಿತಗೊಂಡಿದ್ದರಿಂದ, ವಾಹನಗಳಲ್ಲಿ ತಾಂತ್ರಿಕ ದೋಷಗಳು ಸಂಭವಿಸುವ ಸಾಧ್ಯತೆಗಳಿರುತ್ತವೆ. ಆದ್ದರಿಂದ ಪ್ರತಿದಿನ ವಾಹನಗಳನ್ನು ಚಾಲನೆ ಸ್ಥಿತಿಯಲ್ಲಿರಿಸಲು ಇಂಧನ ಬಳಕೆ ಮಾಡಲಾಗಿರುತ್ತದೆ ಹಾಗೂ ಕೆಲವೊಂದು ಕಿಟಕಿ, ಗಾಜುಗಳು ತಾಪಮಾನದ ಏರುಪೇರಿನಿಂದ ಒಡೆದು ಹೋಗಿರುತ್ತವೆ ಹಾಗೂ ಟಯರ್‌ಗಳು ಪಂಕ್ಚರ್ ಆಗಿದ್ದು, Kms Performanceನ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗಲು ಕಾರಣವಾಗಿರುತ್ತದೆ. ವಾಹನಗಳಿಗೆ ಅಳವಡಿಸಿದ ಬ್ಯಾಟರಿಗಳು ಡಿಸ್ಚಾರ್ಜ್ ಆಗಿ ಹೆಚ್ಚಿನ ವಾಹನ ಪುಷ್ ಸ್ಟಾರ್ಟ್ ಆಗಲು ಕಾರಣವಾಗಿರುತ್ತದೆ.
- ➢ ಅಂತೆಯೇ, ಮಾರ್ಗ ಕಾರ್ಯಾಚರಣೆ ತೆರಳುವ ವಾಹನಗಳಿಗೆ ಪ್ರತಿ ದಿನ ಸ್ಯಾನಿಟೈಸೇಷನ್ ಮಾಡುವುದರ ಜೊತೆಗೆ ಸಾರ್ವಜನಿಕ ಹಿತದೃಷ್ಟಿಯಿಂದ ಇನ್ನೂ ಹೆಚ್ಚಿನ ಸ್ವಚ್ಚತಾ ಕಾರ್ಯ ನಿರ್ವಹಿಸಲು ಹೆಚ್ಚಿನ ಖರ್ಚು ಉಂಟಾಗಿರುತ್ತದೆ.
- ➢ ಇದರೊಂದಿಗೆ ಹಲವು ವಾಹನಗಳನ್ನು ಮೊಬೈಲ್ ಫೀವರ್ ಕ್ಲಿನಿಕ್‌ಗಳಾಗಿ ಪರಿವರ್ತಿಸಿ ಕೋವಿಡ್-19 ಸೋಂಕಿತರನ್ನು ಪರೀಕ್ಷಿಸಲು ಸರ್ಕಾರದ ಅಧೀನ ಆಸ್ಪತ್ರೆಗಳಿಗೆ ನೀಡಲಾಗಿರುತ್ತದೆ.
- ➢ ಎಲ್ಲಾ ರೀತಿಯ ಬಸ್ಸುಗಳಲ್ಲಿ ಸಾಮಾಜಿಕ ಅಂತರವನ್ನು ಕಾಪಾಡಿಕೊಳ್ಳಲು ವಾಹನದ ಆಸನ ಸಂಖ್ಯೆಯ ಶೇ.50 ರಷ್ಟು ಮಾತ್ರ ಪ್ರಯಾಣಿಕರನ್ನು ಅನುಮತಿಸಲಾಗಿದ್ದು, ಇದರಿಂದ ಆರ್ಥಿಕ ಹೊರೆಯಾಗುತ್ತಿದ್ದರೂ, <u>**ಪ್ರಯಾಣಿಕರಿಗೆ ಪ್ರಯಾಣದರದಲ್ಲಿ ಯಾವುದೇ ಏರಿಕೆ ಮಾಡಿರುವುದಿಲ್ಲ.**</u> ಪ್ರಸ್ತುತ, ಎಲ್ಲಾ ಸಾರಿಗೆಗಳಲ್ಲಿ ವಾಹನಗಳಲ್ಲಿರುವ ಆಸನ ಸಂಖ್ಯೆಗಳಷ್ಟು ಮಾತ್ರ ಪ್ರಯಾಣಿಕರನ್ನು ಅನುಮತಿಸಲಾಗುತ್ತಿದೆ.

- ಕೋವಿಡ್-19 ಸೋಂಕು ಹಿನ್ನೆಲೆಯಲ್ಲಿ ಪ್ರಯಾಣಿಕರ ಸಂಖ್ಯೆ ಗಣನೀಯವಾಗಿ ಕಡಿಮೆ ಇದ್ದು, ಮುಂಬರುವ ದಿನಗಳಲ್ಲಿ ಸಹ ಪ್ರಯಾಣಿಕರ ಸಂಖ್ಯೆ ಹೆಚ್ಚಾಗುವ ಲಕ್ಷಣಗಳು ಕಡಿಮೆ ಇರುತ್ತದೆ.
- ಸ್ಥಗಿತಗೊಂಡಿದ್ದ ಎ/ಸಿ ಬಸ್ಸುಗಳ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಗಿದೆ. ಎ/ಸಿ ಬಸ್ಸುಗಳಿಗೆ ಪ್ರಯಾಣಿಕರಿಂದ ಬೇಡಿಕೆ ಕುಸಿದಿರುವುದರಿಂದ ಸಾರಿಗೆ ಆದಾಯ ಕಡಿಮೆಯಾಗಿರುತ್ತದೆ.
- ಪ್ರಯಾಣಿಕರ ಬೇಡಿಕೆ ಇಲ್ಲದೇ ಇರುವುದರಿಂದ ಸಾರಿಗೆಗಳನ್ನು ಪೂರ್ಣ ಪ್ರಮಾಣದಲ್ಲಿ ಕಾರ್ಯಾಚರಣೆ ಮಾಡಲು ಸಾಧ್ಯವಾಗದೇ ಹಾಗೂ ಕಾರ್ಯಾಚರಣೆಯಾಗುತ್ತಿರುವ ಸಾರಿಗೆಗಳಲ್ಲಿ ನಿರೀಕ್ಷಿತ ಪ್ರಯಾಣಿಕರು ಪ್ರಯಾಣಿಸದ ಕಾರಣ ಸಾರಿಗೆ ನಿಗಮಗಳು ತೀರಾ ನಷ್ಟ ಅನುಭವಿಸುತ್ತಿರುತ್ತವೆ.
- ವಾಣಿಜ್ಯ ಮಳಿಗೆಗಳಿಂದ ಹಾಗೂ ಗುತ್ತಿಗೆ ಆಧಾರದ ಮೇಲೆ ಬರುತ್ತಿದ್ದ ಆದಾಯವು ಸಹ ಕುಂಠಿತವಾಗಿರುತ್ತದೆ.

**ಕೊರೋನಾ-19 ರಿಂದ ಉದ್ಭವಿಸಿರುವ ಸಮಸ್ಯೆಗಳನ್ನು ಬಗೆಹರಿಸಲು ಹಾಗೂ ಸಿಬ್ಬಂದಿಗಳಿಗೆ ಕೋವಿಡ್-19ರಿಂದ ಸುರಕ್ಷಿತವಾಗಿರಲು ನಾಲ್ಕೂ ಸಾರಿಗೆ ಸಂಸ್ಥೆಗಳಿಂದ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ:**

- ಕೊರೋನಾ-19 ಸಂಬಂಧ ಲಾಕ್‌ಡೌನ್ ಅವಧಿ ಮತ್ತು ಮುಂದುವರೆದ ಅವಧಿಯಲ್ಲಿ ಸಾರಿಗೆ ಸಂಚಾರವಿಲ್ಲದೆ ಸಂಸ್ಥೆಗಳು ಆರ್ಥಿಕ ಸಂಕಷ್ಟದಲ್ಲಿದ್ದಾಗ, ಅಧಿಕಾರಿ/ಸಿಬ್ಬಂದಿಗಳಿಗೆ ಏಪ್ರಿಲ್-2020 ರಿಂದ ನವೆಂಬರ್-2020ರವರೆಗಿನ ವೇತನವನ್ನು ಪಾವತಿಸಲು, ಸರ್ಕಾರವು ಒಟ್ಟಾರೆಯಾಗಿ ರೂ. 1782.71 ಕೋಟಿಗಳ ವಿಶೇಷ ಅನುದಾನವನ್ನು ಬಿಡುಗಡೆಗೊಳಿಸಿರುತ್ತದೆ.
- ಕೊರೋನಾ ಪೀಡಿತ ನೌಕರರ ಆರೋಗ್ಯದ ಹಿತದೃಷ್ಟಿಯಿಂದ ಪ್ರಾರಂಭದಲ್ಲಿ ಪ್ರಕ್ರಿಯಾ ಆಸ್ಪತ್ರೆ ಹಾಗೂ ರೋಟರಿ ಕ್ಲಬ್‌ರವರ ಸಹಯೋಗದೊಂದಿಗೆ ಕೋವಿಡ್ ಕೇರ್ ಕೇಂದ್ರ ಪ್ರಾರಂಭಿಸಿ ಉಚಿತ ಚಿಕಿತ್ಸಾ ವ್ಯವಸ್ಥೆ ಮಾಡಲಾಗಿದೆ.
- ಕೋವಿಡ್-19 ವೈರಸ್‌ನಿಂದ ಕಾಪಾಡಿಕೊಳ್ಳಲು ಸುರಕ್ಷತಾ ದೃಷ್ಟಿಯಿಂದ ಚಾಲಕ/ನಿರ್ವಾಹಕರಿಗೆ ಮಾಸ್ಕ್, ಮುಖಗವುಸು, ಕೈಗವುಸು, ಸ್ಯಾನಿಟೈಸರ್ ಒದಗಿಸಲಾಗಿದೆ ಮತ್ತು ಕಾರ್ಯಸ್ಥಾನಗಳಾದ ಎಲ್ಲಾ ಘಟಕಗಳ ಆವರಣ, ಕಛೇರಿ, ವಿಶ್ರಾಂತಿ ಕೊಠಡಿಗಳು, ಶೌಚಾಲಯಗಳಲ್ಲಿ ಪ್ರತಿದಿನ ದ್ರಾವಣವನ್ನು ಸಿಂಪಡಿಸುವ ಮೂಲಕ ಶುಚಿತ್ವಕ್ಕೆ ಒತ್ತು ನೀಡಲಾಗಿದೆ. ಪ್ರತಿನಿತ್ಯ ಕರ್ತವ್ಯಕ್ಕೆ ಹಾಜರಾಗುವ ನೌಕರರ ದೇಹದ ಉಷ್ಣಾಂಶ ಮತ್ತು ಪಲ್ಸ್ ಆಕ್ಸಿಮೀಟರ್ ಪರಿಶೀಲಿಸಿ ಕರ್ತವ್ಯದ ಮೇಲೆ ನಿಯೋಜಿಸಲಾಗುತ್ತಿದೆ. ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳುವುದು ಇತ್ಯಾದಿಗಳ ಕುರಿತು ನಿರಂತರವಾಗಿ ಆಯಾ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಆರೋಗ್ಯ ಅಧಿಕಾರಿಗಳ ಸಹಯೋಗದಲ್ಲಿ ಜಾಗೃತಿ/ ತಿಳುವಳಿಕೆ ನೀಡಲಾಗಿದೆ.
- ಸಾರ್ವಜನಿಕ ಪ್ರಯಾಣಿಕರೊಂದಿಗೆ ಅಂತರ ಕಾಪಾಡಿಕೊಳ್ಳಲು, ಚಾಲಕರಿಗೆ ಪ್ರತ್ಯೇಕ ಕ್ಯಾಬೀನ್ ವ್ಯವಸ್ಥೆಯನ್ನು ಮಾಡಲಾಗಿರುತ್ತದೆ.
- ಕೋವಿಡ್-19 ಪಾಸಿಟಿವ್ ಕಂಡುಬಂದ ಪ್ರಕರಣಗಳಲ್ಲಿ ಜಿಲ್ಲಾಡಳಿತ ಮತ್ತು ಜಿಲ್ಲಾ ಆರೋಗ್ಯ ಇಲಾಖೆಯ ಸಹಯೋಗದೊಂದಿಗೆ ಉತ್ತಮ ಚಿಕಿತ್ಸೆ ಕೊಡಿಸಲು ವ್ಯವಸ್ಥೆ ಮಾಡಲಾಗುತ್ತಿದೆ ಮತ್ತು ಅಂತಹ ನೌಕರರನ್ನು ವಿಚಾರಿಸಿ ಆಪ್ತ ಸಲಹೆಗೆ ಒಳಪಡಿಸಿ, ಅವರಿಗೆ ಮನೋಸ್ಥೈರ್ಯವನ್ನು ತುಂಬಲಾಗಿದೆ ಹಾಗೂ ಅವಶ್ಯಕತೆಗನುಗುಣವಾಗಿ ವೈದ್ಯಕೀಯ ಮುಂಗಡ ಮಂಜೂರು ಮಾಡಲಾಗುತ್ತಿದೆ.
- ಸಿಬ್ಬಂದಿಗಳ ಕುಟುಂಬಸ್ಥರಿಗೆ ಕೋವಿಡ್-19 ಸೋಂಕು ತಗುಲಿ, ಸಿಬ್ಬಂದಿಗಳು ಅವರ ಪ್ರಾಥಮಿಕ ಸಂಪರ್ಕದಲ್ಲಿದ್ದರೆ, ಸಿಬ್ಬಂದಿ ಆರೋಗ್ಯದ ಹಿತದೃಷ್ಟಿಯಿಂದ ರಾಜ್ಯ ಸರ್ಕಾರದ ಮಾದರಿಯಂತೆ 14 ದಿನಗಳ ವಿಶೇಷ ಸವೇತನ ರಜೆಯನ್ನು ಮಂಜೂರು ಮಾಡಲಾಗುತ್ತಿದೆ.
- COVID-19 ಲಾಕ್‌ಡೌನ್ ಸಡಿಲಿಕೆ ನಂತರದಲ್ಲಿ ಸಮರ್ಪಕ ಹಾಗೂ ಸುರಕ್ಷಿತ ಸಾರಿಗೆ ಸೇವೆಯನ್ನು ಸಾರ್ವಜನಿಕ ಪ್ರಯಾಣಿಕರಿಗೆ ಒದಗಿಸುವ ಹಾಗೂ ಕೋರೊನಾ ವೈರಾಣು ಸೋಂಕು ಹರಡುವಿಕೆಯನ್ನು ನಿಯಂತ್ರಿಸುವ ನಿಟ್ಟಿನಲ್ಲಿ, ಮುನ್ನೆಚ್ಚರಿಕೆ ಕ್ರಮಗಳೊಂದಿಗೆ ಹಂತ ಹಂತವಾಗಿ ಅನುಸೂಚಿಗಳನ್ನು ಹೆಚ್ಚಿಸಿ ಕಾರ್ಯಾಚರಣೆಯನ್ನು ಆರಂಭಿಸಲಾಗಿದೆ.
- ಸತತವಾಗಿ ಬಸ್ಸುಗಳ ನಿಲುಗಡೆಯಿಂದ ಉಂಟಾದ ದೋಷಗಳನ್ನು ದುರಸ್ಥಿಪಡಿಸಲು ಕ್ರಮ ಕೈಗೊಳ್ಳಲಾಗಿದೆ.
- ಚಾಲನಾ ಸಿಬ್ಬಂದಿಗಳಿಗೆ ಅವಶ್ಯಕತೆಗನುಗುಣವಾಗಿ ರಜೆಯನ್ನು ಮಂಜೂರು ಮಾಡಲಾಗಿದೆ.
- ಸ್ಥಗಿತಗೊಂಡಿದ್ದ ಎ/ಸಿ ಬಸ್ಸುಗಳ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಗಿದೆ.

- ಅಂತರರಾಜ್ಯ ಸಂಚಾರಕ್ಕೆ ಸಂಬಂಧಿಸಿದಂತೆ, ಅಂಧ್ರಪ್ರದೇಶ ರಾಜ್ಯಕ್ಕೆ, ಕೇರಳ ರಾಜ್ಯಕ್ಕೆ, ಗೋವಾ ರಾಜ್ಯಕ್ಕೆ, ಮಹಾರಾಷ್ಟ್ರ ರಾಜ್ಯಕ್ಕೆ, ತೆಲಂಗಾಣ ರಾಜ್ಯಕ್ಕೆ, ಪುದುಚೇರಿಗೆ ಹಾಗೂ ತಮಿಳುನಾಡು ರಾಜ್ಯಕ್ಕೆ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಗಿದೆ.
- ಅನುಸೂಚಿಗಳ ಪರಿಷ್ಕರಣೆ ಮಾಡಿ ಜನದಟ್ಟಣೆಯಿರುವ ಮಾರ್ಗಗಳಲ್ಲಿ ಸರತಿಗಳನ್ನು ಹೆಚ್ಚಿಸಿ ಸಾರಿಗೆ ಆದಾಯ ಹೆಚ್ಚಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ.
- ಉತ್ತಮ ಆದಾಯ ಮಾರ್ಗಗಳಲ್ಲಿ ಹೆಚ್ಚುವರಿ ಅನುಸೂಚಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.
- ಕಡಿಮೆ ಆದಾಯ ಬರುವ ಅನುಸೂಚಿಗಳನ್ನು ಪರಿಷ್ಕರಣೆ ಮಾಡಲಾಗುತ್ತಿದೆ.
- ಮಾರ್ಗ ತನಿಖಾ ಕಾರ್ಯವನ್ನು ಸಮರ್ಪಕವಾಗಿ ಕೈಗೊಂಡು ಆದಾಯ ಸೋರಿಕೆಯಾಗದಂತೆ ಕ್ರಮವಹಿಸಲಾಗುತ್ತಿದೆ.

<u>ಅಲ್ಲದೇ ಕ.ರಾ.ರ.ಸಾ.ನಿಗಮವು -</u>

- ಬೆಂಗಳೂರಿನ ಪೀಣ್ಯದಲ್ಲಿರುವ ನಿಗಮದ ಬಸವೇಶ್ವರ ಬಸ್ ನಿಲ್ದಾಣದಲ್ಲಿ ಕೋವಿಡ್ ಆರೈಕೆ ಕೇಂದ್ರವನ್ನು (covid care centre) ಆರಂಭಿಸಲಾಗಿದೆ. ಸದರಿ ಕೋವಿಡ್ ಆರೈಕೆ ಕೇಂದ್ರದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗಕ್ಕೆ ತುತ್ತಾದ ಪ್ರಕರಣಗಳ ಪೈಕಿ Asymptomatic ಎಂದು ಜಿಲ್ಲಾ ಆರೋಗ್ಯ ಅಧಿಕಾರಿಗಳು ಪ್ರಮಾಣಿಕರಿಸಿದ ಮತ್ತು ಈ Institution quarantine ಕೇಂದ್ರದಲ್ಲಿ ಆರೈಕೆ ಪಡೆಯಲು ಇಚ್ಛಿಸುವ ರಸ್ತೆ ಸಾರಿಗೆ ನಿಗಮಗಳ ನೌಕರರ / ಅಧಿಕಾರಿಗಳು ಹಾಗೂ ಅವರ ಅವಲಂಬಿತರಿಗೆ ಚಿಕಿತ್ಸೆ ನೀಡಲಾಗಿದೆ.

<u>ಬೆಂ.ಮ.ಸಾ.ಸಂಸ್ಥೆಯು -</u>

- ಘಟಕಗಳಲ್ಲಿ ಬಿಬಿಎಂಪಿ ವತಿಯಿಂದ ಕೋವಿಡ್-19 ಉಚಿತ ತಪಾಸಣೆ ಮಾಡುವ ಮೂಲಕ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ.
- ಕರೋನಾ ಸಾಂಕ್ರಾಮಿಕ ರೋಗದ ಸಿಬ್ಬಂದಿ/ಸಾರ್ವಜನಿಕರಿಗೆ ಜಾಗೃತಿ ಮೂಡಿಸಲು ಸಂಸ್ಥೆಯ 2000 ಬಸ್‌ಗಳ ಹಿಂಭಾಗ, ಚಾಲಕರ ಹಿಂಭಾಗ ಮತ್ತು ಲುವರ್ ಗಾಜುಗಳ ಮೇಲೆ ಸಿಬ್ಬಂದಿ/ ಸಾರ್ವಜನಿಕರು ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳುವ ಬಗ್ಗೆ, ಮಾಸ್ಕ್ ಧರಿಸುವ ಬಗ್ಗೆ ಹಾಗೂ ಇನ್ನಿತರ ಸುರಕ್ಷತಾ ವಿಧಿವಿಧಾನಗಳ ಬಗ್ಗೆ ಜಾಹಿರಾತು ಪ್ರದರ್ಶಿಸಿ ತಿಳುವಳಿಕೆ ನೀಡಲಾಗಿದೆ.
- ಪ್ರಯಾಣಿಕರು ಹಾಗೂ ನಿರ್ವಾಹಕರ ನಡುವೆ ನಗದು ವ್ಯವಹಾರವನ್ನು ಕಡಿಮೆಗೊಳಿಸುವ ನಿಟ್ಟಿನಲ್ಲಿ ಪ್ರಯಾಣ ದರ ರೂ.5/- ರ ಗುಣಕದಲ್ಲಿ ನಿಗದಿಪಡಿಸಿ ಪುನರ್‌ರಚಿತ ಪ್ರಯಾಣದರಗಳನ್ನು ಆಕರಿಸಲಾಗುತ್ತಿದೆ ಹಾಗೂ ಡಿಜಿಟಲ್ ಟಿಕೆಟಿಂಗ್ ವ್ಯವಸ್ಥೆಯನ್ನು (QR code based) ಅಳವಡಿಸಿಕೊಳ್ಳಲಾಗಿರುತ್ತದೆ.
- ಕೋವಿಡ್-19 ಖಾಯಿಲೆ ತೀವ್ರತೆಯಿಂದ ಆಸ್ಪತ್ರೆಯಲ್ಲಿ ಒಳರೋಗಿಯಾಗಿ ಚಿಕಿತ್ಸೆ ಪಡೆಯುತ್ತಿರುವ ನೌಕರರು ಮತ್ತು ಅವರ ಅವಲಂಬಿತರಿಗೆ ಆಸ್ಪತ್ರೆ ವತಿಯಿಂದ ನೀಡುವ ಅಂದಾಜು ಪಟ್ಟಿಯಂತೆ ಆದ್ಯತೆಯ ಮೇರೆಗೆ ಅರ್ಹ ವೈದ್ಯಕೀಯ ಮುಂಗಡ ಹಣವನ್ನು ಮಂಜೂರು ಮಾಡಿ ಅನುಕೂಲ ಮಾಡಲಾಗಿದೆ ಹಾಗೂ ಸೋಂಕು ದೃಢಪಟ್ಟ ನೌಕರರಿಗೆ ತುರ್ತು ಚಿಕಿತ್ಸೆಗಾಗಿ ಘಟಕ/ಕಾರ್ಯಸ್ಥಳದ ಮಟ್ಟದಲ್ಲಿಯೇ ರೂ.10,000/- ಮುಂಗಡ ನೀಡುವ ವ್ಯವಸ್ಥೆ ಮಾಡಲಾಗಿದೆ.
- ಕೋವಿಡ್-19 ಪಾಸಿಟಿವ್ ಪ್ರಕರಣದಲ್ಲಿ Home Isolation ನಲ್ಲಿರುವ ನೌಕರರ ಸುರಕ್ಷತೆ ದೃಷ್ಟಿಯಿಂದ "ಕೋವಿಡ್ ಕಿಟ್" ಜೊತೆಗೆ ಆಯುಷ್ ಇಲಾಖೆಯಿಂದ ನೀಡಿರುವ ರೋಗ ನಿರೋಧಕ ಶಕ್ತಿಯುಳ್ಳ ಮಾತ್ರೆಗಳು, ಚವನ್‌ಪ್ರಾಶ್ ವಿತರಿಸಲಾಗುತ್ತಿದೆ.

<u>ಈ.ಕ.ರ.ಸಾ.ಸಂಸ್ಥೆಯು -</u>

- ಪ್ರಸ್ತುತ ನೂತನ ಪಾರ್ಸಲ್ ಕೋರಿಯರ್ ವ್ಯವಸ್ಥೆ ಅನುಷ್ಠಾನಗೊಳಿಸುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.
- ಶಾಲಾ-ಕಾಲೇಜು ಮತ್ತು ಕಾರ್ಖಾನೆಗಳ ಮುಖ್ಯಸ್ಥರಿಗೆ ಪತ್ರ ಬರೆದು ಚಾರ್ಟರ್ಡ ಸರ್ವಿಸ್ ಪಡೆದುಕೊಳ್ಳಲು ಕ್ರಮ ಜರುಗಿಸಲಾಗಿರುತ್ತದೆ.
- ಖಾಲಿ ಇರುವ ಮಳಿಗೆಗಳಿಗೆ ಟೆಂಡರ್ ಪ್ರಕ್ರೀಯೆ ಸರಳೀಕರಣಗೊಳಿಸಿ ಆದಾಯ ಹೆಚ್ಚಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.
- ಜಾಹೀರಾತು ಆದಾಯ ಹೆಚ್ಚಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.
- ಪ್ರತಿ ಘಟಕ/ಕಾರ್ಯಾಗಾರಗಳಲ್ಲಿ ಸಾಮಾಜಿಕ ಅಂತರವನ್ನು ಕಾಪಾಡಲು ಸಿಬ್ಬಂದಿಗಳನ್ನು ಪಾಳಿಗಳಲ್ಲಿ ವಿಂಗಡಿಸಿ ಸಂಖ್ಯೆಯನ್ನು ಕಡಿಮೆ ಮಾಡಲಾಗಿರುತ್ತದೆ.
- ಸಿಬ್ಬಂದಿಗಳಲ್ಲಿ ಸಾಮಾಜಿಕ ಅಂತರವನ್ನು ಕಾಪಾಡುವ ನಿಟ್ಟಿನಲ್ಲಿ ಪಾಳಿಗಳನ್ನು (ಶಿಫ್ಟ್) ಪರಿಷ್ಕರಿಸಿ, ಒಂದೇ ಪಾಳಿಯಲ್ಲಿ ಹೆಚ್ಚು ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸದಂತೆ ಕ್ರಮ ಕೈಗೊಳ್ಳಲಾಗಿದೆ.

**<u>ಸಾರಿಗೆ ಸಂಸ್ಥೆಗಳಿಗೆ ಆಗಿರುವ ನಷ್ಟವನ್ನು ಸರಿದೂಗಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳು:</u>**

<u>ಕ.ರಾ.ರ.ಸಾ.ನಿಗಮ -</u>

- ಹಂತ-ಹಂತವಾಗಿ ಕೋವಿಡ್-19 ಲಾಕ್‌ಡೌನ್ ಪೂರ್ವದಲ್ಲಿದಂತೆ ಅನುಸೂಚಿಗಳನ್ನು ಕಾರ್ಯಾಚರಣೆ ಮಾಡಲು ಮತ್ತು ಆದಾಯವನ್ನು ಗಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.
- ಪ್ರಸಕ್ತ ವರ್ಷ ಯಾವುದೇ ಹೊಸ ಅನುಸೂಚಿಗಳನ್ನು ಪ್ರಾರಂಭಿಸಲಾಗುವುದಿಲ್ಲ. ಇದರಿಂದಾಗಿ ಹೊಸ ವಾಹನಗಳನ್ನು ಖರೀದಿಸಲಾಗುವುದಿಲ್ಲ.
- ಅಂತರರಾಜ್ಯ ಸಂಚಾರಕ್ಕೆ ಸಂಬಂಧಿಸಿದಂತೆ, ಅಂಧ್ರಪ್ರದೇಶ ರಾಜ್ಯಕ್ಕೆ, ಕೇರಳ ರಾಜ್ಯಕ್ಕೆ, ಗೋವಾ ರಾಜ್ಯಕ್ಕೆ, ಮಹಾರಾಷ್ಟ್ರ ರಾಜ್ಯಕ್ಕೆ, ತೆಲಂಗಾಣ ರಾಜ್ಯಕ್ಕೆ, ಪುದುಚೇರಿಗೆ ಹಾಗೂ ತಮಿಳುನಾಡು ರಾಜ್ಯಕ್ಕೆ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಗಿದೆ.
- ಪ್ರಯಾಣಿಕರಿಂದ ಕಡಿಮೆ ಬೇಡಿಕೆ ಇರುವ ಕಾರಣ ಪೂರ್ಣ ಪ್ರಮಾಣವಾಗಿ ಅನುಸೂಚಿಗಳನ್ನು ಕಾರ್ಯಾಚರಣೆ ಮಾಡಲು ಸಾಧ್ಯವಾಗಿರುವುದಿಲ್ಲ. ಆದಾಗ್ಯೂ, ಪ್ರಯಾಣಿಕರ ದಟ್ಟಣೆ ಮತ್ತು ಅವಶ್ಯಕತೆಗನುಗುಣವಾಗಿ ಬಸ್ಸುಗಳ ಸಂಖ್ಯೆಯನ್ನು ಹೆಚ್ಚಿಸಲಾಗುತ್ತಿದೆ.

<u>ಬೆಂ.ಮ.ಸಾ.ಸಂಸ್ಥೆ -</u>

- ಸಂಸ್ಥೆಯು ಕಾರ್ಮಿಕ ಇಲಾಖೆಯ ಸಹಯೋಗದೊಂದಿಗೆ ಬೆಂಗಳೂರು ನಗರದ ಕಟ್ಟಡ ಮತ್ತು ನಿರ್ಮಾಣ ಕಾರ್ಮಿಕರಿಗೆ 'ಸಹಾಯ ಹಸ್ತ' ಪಾಸನ್ನು ವಿತರಣೆ ಮಾಡುತ್ತಿದೆ.
- ಮಹಿಳಾ ಗಾರ್ಮೆಂಟ್ಸ್ ನೌಕರರಿಗೆ ಹೆಚ್ಚಿನ ರಿಯಾಯಿತಿ ದರದಲ್ಲಿ ಮಾಸಿಕ ಪಾಸುಗಳನ್ನು ವಿತರಣೆ ಮಾಡುವ ಸಂಬಂಧ ಪಾಸಿನ ವೆಚ್ಚವನ್ನು ಭರಿಸಲು ಉದ್ದೇಶಿಸಿ ಸಂಸ್ಥೆಯು ಕಾರ್ಮಿಕ ಇಲಾಖೆ, ಕರ್ನಾಟಕ ಸರ್ಕಾರ ರವರಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ.
- ಸರ್ಕಾರ, ಬಿಬಿಎಂಪಿ, ಬಿಟಿಪಿ, ನಗರ ಭೂ ಸಾರಿಗೆ ನಿರ್ದೇಶನಾಲಯ ರವರುಗಳ ಸಹಯೋಗದೊಂದಿಗೆ ಸೆಂಟ್ರಲ್ ಸಿಲ್ಕ್ ಬೋರ್ಡ್‌ನಿಂದ ಟಿನ್ ಫ್ಯಾಕ್ಟರಿಯವರೆಗೆ 'ಬಸ್ ಆದ್ಯತಾ ಪಥವನ್ನು' ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗಿದೆ. ಇದರಿಂದ ನಗರದ ಸಂಚಾರ ದಟ್ಟಣೆಯು ಕಡಿಮೆಯಾಗಿ, ಸಾರ್ವಜನಿಕರನ್ನು ಸಮೂಹ ಸಾರಿಗೆಯನ್ನು ಬಳಸಲು ಉತ್ತೇಜಿಸಲಾಗುತ್ತಿದೆ. ಮುಂದುವರೆದು, ನಗರದ ಸಂಚಾರ ದಟ್ಟಣೆಯನ್ನು ಕಡಿಮೆಗೊಳಿಸುವ ಹಿನ್ನಲೆಯಲ್ಲಿ ಹೆಚ್ಚಿನ ಸಂಚಾರ ದಟ್ಟಣೆಯ 12 ಕಾರಿಡಾರ್‌ಗಳಲ್ಲಿ ಬಸ್ ಆದ್ಯತಾ ಫಥವನ್ನು 2ನೇ ಹಂತದಲ್ಲಿ ಅನುಷ್ಠಾನಗೊಳಿಸಲು ಯೋಜಿಸಲಾಗಿದೆ.
- ಸಂಸ್ಥೆಯು ಸಾಂದರ್ಭಿಕ ಒಪ್ಪಂದ, ಖಾಯಂ ಗುತ್ತಿಗೆ ಹಾಗೂ ಡೆಡಿಕೇಟೆಡ್ ಸೇವೆಗಳನ್ನು ಒದಗಿಸುತ್ತಿದೆ.
- ಮೆಟ್ರೋ ಪ್ರಯಾಣಿಕರನ್ನು ಸಂಸ್ಥೆಯ ಸಾರಿಗೆ ಸೌಲಭ್ಯದತ್ತ ಸೆಳೆಯಲು ಎಲ್ಲಾ ಮೆಟ್ರೋ ನಿಲ್ದಾಣಗಳಿಂದ ಮೆಟ್ರೋ ಫೀಡರ್ ಸೇವೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.
- ಸಮೂಹ ಸಾರಿಗೆಯನ್ನು ಉತ್ತೇಜಿಸಲು ಹಾಗೂ ಮೆಟ್ರೋ ಪ್ರಯಾಣಿಕರಿಗೆ ಸಮರ್ಪಕ ಮೆಟ್ರೋ ಫೀಡರ್ ಸಾರಿಗೆ ಸೌಲಭ್ಯವನ್ನು ಒದಗಿಸುವ ನಿಟ್ಟಿನಲ್ಲಿ 90 ಎಲೆಕ್ಟ್ರಿಕ್ ಬಸ್ಸುಗಳನ್ನು ಸಂಸ್ಥೆಯ ವಾಹನ ಬಲಕ್ಕೆ ಸೇರ್ಪಡೆಗೊಳಿಸಲು ಯೋಜಿಸಲಾಗಿದೆ.
- ಭಾರತ ಸರ್ಕಾರದ ಫೇಮ್-2 ಅಡಿಯಲ್ಲಿ 300 ಹವಾನಿಯಂತ್ರಿತ ಬಸ್ಸುಗಳು ಹಾಗೂ ಸ್ಮಾರ್ಟ್ ಸಿಟಿ ಯೋಜನೆಯಡಿಯಲ್ಲಿ 90 ಮೆಟ್ರೋ ಫೀಡರ್ ಬಸ್ಸುಗಳು ಒಟ್ಟಾರೆ 390 ಬಸ್ಸುಗಳನ್ನು ಸಂಸ್ಥೆಯ ವಾಹನ ಬಲಕ್ಕೆ ಸೇರ್ಪಡೆಗೊಳಿಸಲು ಯೋಜಿಸಲಾಗಿದೆ.
- 643 ನೂತನ ಬಸ್ಸುಗಳನ್ನು ಸಂಸ್ಥೆಯ ವಾಹನ ಬಲಕ್ಕೆ ಸೇಪರ್ಡೆಗೊಳಿಸಲು ಯೋಜಿಸಲಾಗಿದೆ.

<u>ವಾ.ಕ.ರ.ಸಾ.ಸಂಸ್ಥೆ -</u>

- ವಿಭಾಗದ ಪ್ರತಿಷ್ಠಿತ ಸಾರಿಗೆಗಳಿಗೆ ಪ್ರೋತ್ಸಾಹಕ ಪ್ರಯಾಣ ದರಗಳನ್ನು ಅಳವಡಿಸಲಾಗಿದೆ.
- ಸಂಸ್ಥೆಯ ವಾಹನಗಳಲ್ಲಿ ಪ್ರಯಾಣಿಸುವ ಪ್ರಯಾಣಿಕರಿಗೆ ಆಯ್ದ ಮಾರ್ಗಗಳಲ್ಲಿ ರಿಯಾಯಿತಿ ದರದಲ್ಲಿ ದೈನಂದಿನ ಪಾಸುಗಳನ್ನು ವಿತರಿಸಲಾಗುತ್ತಿದೆ.
- ನಗರ/ಉಪನಗರ ಸಾರಿಗೆಗಳಲ್ಲಿ ಪ್ರಯಾಣಿಸುವ ಪ್ರಯಾಣಿಕರಿಗೂ ಕೂಡ ದೈನಂದಿನ ಪಾಸ್ ಸೌಲಭ್ಯ ಒದಗಿಸಲಾಗಿದೆ.
- ಮಾಸಿಕ ಬಸ್ ಪಾಸ್ ವ್ಯವಸ್ಥೆಯನ್ನು ಕೂಡ ಅಳವಡಿಸಲಾಗಿದೆ.
- ಪ್ರಸ್ತುತ ಶಾಲಾ ಕಾಲೇಜುಗಳ ಈವರೆಗೆ ಆರಂಭವಾಗದೇ ಇರುವುದರಿಂದ ಶಾಲಾ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಕಾರ್ಯಾಚರಣೆಯಲ್ಲಿದ್ದ ಸರತಿ/ಅನುಸೂಚಿಗಳನ್ನು ತಾತ್ಕಾಲಿಕವಾಗಿ ಕಡಿತಗೊಳಿಸಿ, ಜನದಟ್ಟಣೆ ಹೆಚ್ಚಿರುವ ಮಾರ್ಗಗಳಲ್ಲಿ ಕಾರ್ಯಾಚರಿಸಲಾಗಿದೆ.
- ಅವಶ್ಯಕ ಸರತಿಗಳನ್ನು ಹೊರತುಪಡಿಸಿ ಪ್ರಯಾಣಿಕರ ದಟ್ಟಣೆ ತೀರಾ ಕಡಿಮೆ ಇರುವ ಮಾರ್ಗದ ಸಾರಿಗೆಗಳನ್ನು ಹಾಗೂ ಮುಂಗಡ ಬುಕ್ಕಿಂಗ್ ಆಗದೇ ಇರುವ ಪ್ರತಿಷ್ಠಿತ ಸಾರಿಗೆಗಳನ್ನು ರದ್ದುಪಡಿಸಲಾಗುತ್ತಿದೆ.
- ದ್ವಿಗಣ ಅನುಸೂಚಿಗಳನ್ನು ಏಕಗಣ ಅನುಸೂಚಿಗಳಾಗಿ ಪರಿಷ್ಕರಿಸಿ ಸಿಬ್ಬಂದಿ ಅನುಪಾತವನ್ನು ಕಡಿಮೆಗೊಳಿಸಲಾಗಿದೆ.

<u>ಈ.ಕ.ರ.ಸಾ.ಸಂಸ್ಥೆ</u>

- ಹಂತ ಹಂತವಾಗಿ ಕೋವಿಡ್-19 ಲಾಕ್‌ಡೌನ್ ಪೂರ್ವದಲ್ಲಿದಂತೆ ಅನುಸೂಚಿಗಳನ್ನು ಕಾರ್ಯಾಚರಣೆ ಮಾಡಲು ಮತ್ತು ಆದಾಯವನ್ನು ಗಳಿಸಲು ಕ್ರಮ ಕೈಗೊಳ್ಳಲಾಗಿರುತ್ತದೆ.
- ಪ್ರಸಕ್ತ ವರ್ಷ ಯಾವುದೇ ಹೊಸ ಅನುಸೂಚಿಗಳನ್ನು ಪ್ರಾರಂಭಿಸಲಾಗಿರುವುದಿಲ್ಲ. ಇದರಿಂದಾಗಿ ಹೊಸ ವಾಹನಗಳನ್ನು ಖರೀದಿಸಲಾಗುವುದಿಲ್ಲ.
- ಪ್ರಯಾಣಿಕರಿಂದ ಕಡಿಮೆ ಬೇಡಿಕೆ ಇರುವ ಕಾರಣ ಪೂರ್ಣ ಪ್ರಮಾಣವಾಗಿ ಅನುಸೂಚಿಗಳನ್ನು ಕಾರ್ಯಾಚರಣೆ ಮಾಡಲು ಸಾಧ್ಯವಾಗಿರುವುದಿಲ್ಲ. ಆದಾಗ್ಯೂ ಪ್ರಯಾಣಿಕರ ದಟ್ಟಣೆ ಮತ್ತು ಅವಶ್ಯಕತೆ ಅನುಗುಣವಾಗಿ ಬಸ್ಸುಗಳ ಸಂಖ್ಯೆಯನ್ನು ಹೆಚ್ಚಿಸಲಾಗುತ್ತಿದೆ.